ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಪಾಟೀ ಸವಾಲು ಪ್ರತಿವಾದಿ ಪರ ವಕೀಲರಿಂದಃ-

ನಾನು ಬಿ.ಎ. ಪದವಿಧರಳಾಗಿರುತ್ತೇನೆ. ನಾನು ಈಗ ಗೃಹಿಣಿಯಾಗಿರುತ್ತೇನೆ. ನಮ್ಮ ತಂದೆ ತಾಯಿಗೆ 3 ಜನ ಮಕ್ಕಳು. ನಮ್ಮ ತಂದೆಯವರು ಇಟ್ಟಿಗೆ ಫ್ಯಾಕ್ಟರಿಯನ್ನು ಹುಬ್ಬಳ್ಳಿಯಲ್ಲಿ ನಡೆಸುತ್ತಿದ್ದರು. ದಾವಾ ಆಸ್ತಿಯಲ್ಲದೇ ನಿಮ್ಮ ತಂದೆಗೆ ಬೇರೆ ಜಮೀನು ಎಷ್ಟು ಇದೆ ಎಂದರೆ ಸಾಕ್ಷಿ ಇಟ್ಟಿಗೆ ಫ್ಯಾಕ್ಟರಿ ಇರುತ್ತದೆ ಅದು ಎಷ್ಟು ವಿಸ್ತೀರ್ಣ ಇರುತ್ತದೆ ಎಂದು ನನಗೆ ತಿಳಿದಿರುವುದಿಲ್ಲ. ಇಟ್ಟಿಗೆ ಫ್ಯಾಕ್ಟರಿ ಇರುವ ಸ್ವತ್ತು ನಮ್ಮ ತಂದೆಯ ಸ್ವಯಾರ್ಜಿತ ಆಸ್ತಿ ಎಂದರೆ ಸರಿ. ನಮ್ಮ ತಂದೆಯವರು ಇಟ್ಟಿಗೆ ಫ್ಯಾಕ್ಟರಿ ನಡೆಸುವ ಪೂರ್ವದಲ್ಲಿ ಹೆಚ್.ಎಂ.ಟಿ. ಕಂಪನಿಯಲ್ಲಿ ಕೆಲಸ ಮಾಡಿಕೊಂಡಿದ್ದರು. ಅದಕ್ಕೂ ಪೂರ್ವದಲ್ಲಿ ನಮ್ಮ ತಂದೆಯಲ್ಲಿ ಮಿಲಿಟರಿಯಲ್ಲಿ ಕೆಲಸ ಮಾಡಿಕೊಂಡಿದ್ದರು.

ದಾವಾ ಆಸ್ತಿ ಮತ್ತು ಇಟ್ಟಿಗೆ ಫ್ಯಾಕ್ಟರಿಯನ್ನು ನಮ್ಮ ತಂದೆಯವರು ಖರೀದಿಸಿದ ಸ್ವತ್ತುಗಳು ಎಂದರೆ ಸರಿ. ಇಟ್ಟಿಗೆ ಫ್ಯಾಕ್ಟರಿ ಈಗ ನಮ್ಮ ಬಳಿ ಇರುವುದಿಲ್ಲ ಅದನ್ನು ಮಾರಾಟ ಮಾಡಲಾಗಿರುತ್ತದೆ. ನನ್ನ ತಂದೆಯವರು ಇಟ್ಟಿಗೆ ಫ್ಯಾಕ್ಟರಿಯನ್ನು ಯಾವಾಗ ಮಾರಾಟ ಮಾಡಿರುತ್ತಾರೆ ಎಂದು ನನಗೆ ತಿಳಿದಿರುವುದಿಲ್ಲ. ಸದರಿ ಮಾರಾಟವನ್ನು ನನ್ನ ಮದುವೆಯ ನಂತರ ಮಾಡಿರುತ್ತಾರೆ. ಸದರಿ ಮಾರಾಟ ಮಾಡುವ ಸಮಯದಲ್ಲಿ ನಾನು ಹೋಗಿರುವುದಿಲ್ಲ ಎಂದರೆ ಸರಿ. ನನ್ನ ಅಣ್ಣ ಟಯೋಟಾ ಕಂಪನಿಯಲ್ಲಿ ಕೆಲಸ ಮಾಡಿಕೊಂಡಿರುತ್ತಾರೆ ನನ್ನ ತಮ್ಮ ಏನು ಕೆಲಸ ಮಾಡಿಕೊಂಡಿರುತ್ತಾರೆ ಎಂದು ನನಗೆ ಗೊತ್ತಿರುವುದಿಲ್ಲ. ನಾನು ಮತ್ತು ನನ್ನ ಅಣ್ಣ ತಮ್ಮಂದಿರ

ನುಡವೆ ಸಂಬಂಧ ಚನ್ನಾಗಿ ಇರುವುದಿಲ್ಲ. 4-5 ವರ್ಷಗಳಿಂದ ನನ್ನ ಮತ್ತು ಅಣ್ಣ ತಮ್ಮಂದಿರ ನುಡವೆ ಸಂಬಂಧ ಚನ್ನಾಗಿರುವುದಿಲ್ಲ. ಪ್ರಸ್ತುತ ದಾವೆಯನ್ನು ದಾಖಲಿಸುವ ಪೂರ್ವದಿಂದ ಸಂಬಂಧ ಸರಿಯಾಗಿ ಇರುವುದಿಲ್ಲ.

ಪ್ರಸ್ತುತ ದಾವೆ ದಾಖಲಿಸುವ ಪೂರ್ವದಲ್ಲಿ 1 ನೇ ಪ್ರತಿವಾದಿ ಚಂದ್ರಯ್ಯನವರು ನನ್ನ ಅಣ್ಣ ಮತ್ತು ತಮ್ಮನವರ ವಿರುದ್ಧ ದಾವೆ ಸಲ್ಲಿಸಿದ್ದರು ಎಂದರೆ ಸಾಕ್ಷಿ ಅದು ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ನನ್ನ ಸಾಕ್ಷಿ ಪ್ರಮಾಣ ಪತ್ರದಲ್ಲಿ ಬರೆಸಿರುವ ಮಾಹಿತಿಯನ್ನು ನಾನೇ ನೀಡಿರುತ್ತೇನೆ. ನನ್ನ ಸಾಕ್ಷಿ ಪ್ರಮಾಣ ಪತ್ರದಲ್ಲಿ ಈ ಹಿಂದೆ ನಡೆದಿರುವ ದಾವೆಯ ಬಗ್ಗೆ ಹೇಳಿ ಬರೆಸಿರುತ್ತೇನೆ ಎಂದರೆ ಗೊತ್ತಾದ ನಂತರ ಬರೆಸಿರುತ್ತೇನೆ ಎಂದು ನುಡಿಯುತ್ತಾರೆ. ದಾವೆ ಸಲ್ಲಿಸಲು ನನಗೆ ಯಾರು ಮಾಹಿತಿ ನೀಡಿರುವುದಿಲ್ಲ ನಾನೇ ಸಲ್ಲಿಸಿರುತ್ತೇನೆ. ನಾನು ಹಾಜರುಪಡಿಸಿರುವ ದಾಖಲೆಗಳನ್ನು ನನ್ನ ತಂದೆಯವರು ನನಗೆ ಒದಗಿಸಿರುತ್ತಾರೆ. ನಮ್ಮ ತಂದೆಯವರು 2012 ರಲ್ಲಿ ತೀರಿಕೊಂಡಿರುತ್ತಾರೆ. ನಮ್ಮ ತಂದೆಯವರು ಬದುಕಿದ್ದಾಗ ಒಂದು ಕರಾರು ಪತ್ರವನ್ನು ಮಾಡಿಸಿದ್ದರು ಎಂದರೆ ಸರಿ.

ಈ ಹಂತದಲ್ಲಿ ಮುಂದುವರೆದ ಪಾಟೀ ಸವಾಲಿಗೆ ವಕೀಲರು ಸಮಯ ಕೋರಿದ ಕಾರಣ ಮುಂದೂಡಲಾಯಿತು.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)
(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ಮಹೇಶ್ ಬಿ.ಟಿ)
1 ನೇ ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು,
ರಾಮನಗರ.